ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ರಾಜ್ಯದಲ್ಲಿ ಕೆರೆಗಳನ್ನು ಒತ್ತುವರಿ ಮಾಡಿರುವುದನ್ನು ತೆರವುಗೊಳಿಸುವ ಕುರಿತು

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

183 (1495) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕೊಡಗು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒಳಪಡುವ ಎಷ್ಟು ಕೆರೆಗಳಿವೆ; (ಹೆಸರುಗಳೊಂದಿಗೆ ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಆ) ಈ ಕೆರೆಗಳನ್ನು ಖಾಸಗಿಯವರು ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಇ) ಈ ಕೆರೆಗಳನ್ನು ಒತ್ತುವರಿದಾರರಿಂದ ಬಿಡಿಸಿ, ಅಭಿವೃದ್ಧಿಪಡಿಸಲು ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)